**ಕರ್ನಾಟಕ ಸರ್ಕಾರದ ನಡವಳಿ**

**ವಿಷಯ:** ಶ್ರೀಮತಿ ಪ್ರೇಮಲತಾ.ಎನ್. ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಹರಳಹಳ್ಳಿ ಗ್ರಾಮಪಂಚಾಯ್ತಿ, ಹಾಸನ ತಾಲ್ಲೂಕು, ಹಾಸನ ಜಿಲ್ಲೆ ಇವರು ಸರ್ಕಾರಿ/ಸಾರ್ವಜನಿಕ ನೌಕರರಾಗಿ ದುರ್ನಡತೆ ಎಸಗಿರುವ ಕುರಿತು ವರದಿ.

**ಓದಲಾಗಿದೆ:**

ನಿಬಂಧಕರು, ಕರ್ನಾಟಕ ಲೋಕಾಯುಕ್ತ ಬೆಂಗಳೂರು, ಇವರ ಪತ್ರ ಸಂಖ್ಯೆ:
ಕಂಪ್ಲೆಂಟ್/ಉಪಲೋಕ್/ಎಂವೈಎಸ್-2495/2016/ಡಿಆರ್ಇ-5, ದಿನಾಂಕ: 30.03.2017

**ಪ್ರಸ್ತಾವನೆ:**

ಮೇಲೆ ಓದಲಾದ ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು, ನಿಬಂಧಕರು ಕರ್ನಾಟಕ ಲೋಕಾಯುಕ್ತ ಇವರ ಪತ್ರದ ಸಂಗಡ ಲಗತ್ತಿಸಿರುವ ಮಾನ್ಯ ಉಪಲೋಕಾಯುಕ್ತರು ಕರ್ನಾಟಕ ಲೋಕಾಯುಕ್ತ ಕಾಯ್ದೆ 1984 ರ ಸೆಕ್ಷನ್ 12(3)ರ ಅಡಿಯಲ್ಲಿ ಸಲ್ಲಿಸಿರುವ ದಿನಾಂಕ: 18-03-2017 ರ ವರದಿಯಲ್ಲಿ ದೂರುದಾರರಾದ ಶ್ರೀ ಟಿ.ಪಿ.ರಮೇಶ್ ಇವರು ಶ್ರೀಮತಿ ಪ್ರೇಮಲತಾ.ಎನ್. ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಹರಳಹಳ್ಳಿ ಗ್ರಾಮಪಂಚಾಯ್ತಿ, ಹಾಸನ ತಾಲ್ಲೂಕು, ಹಾಸನ ಜಿಲ್ಲೆ ಇವರ ವಿರುದ್ಧ ಕರ್ತವ್ಯ ಲೋಪದ ಬಗ್ಗೆ ನೀಡಿದ ದೂರನ್ನು ಕರ್ನಾಟಕ ಲೋಕಾಯುಕ್ತ ಕಾಯ್ದೆಯ ಕಲಂ 9 ರ ಅಡಿಯಲ್ಲಿ ತನಿಖೆಗೆ ತೆಗೆದುಕೊಂಡಿದ್ದೇವೆ. ಸದರಿಯವರು ಕಡತ ಮತ್ತು ದಾಖಲೆಗಳನ್ನು ಕೂಲಂಕಷವಾಗಿ ಪರಿಶೀಲಿಸಲಾಗಿ, ಈ ಕೆಳಕಂಡ ಅಂಶಗಳು ಕಂಡುಬಂದಿವೆ ಎಂದು ತಿಳಿಸಿರುತ್ತಾರೆ.

ತಮಲಾಪುರ ಗ್ರಾಮದ ಪುಟ್ಟತಾಯಮ್ಮ ಇವರು ಕರ್ನಾಟಕ ಪಂಚಾಯಿತಿ ರಾಜ್ ಅಧಿನಿಯಮದಂತೆ ಚರಂಡಿಗೆ ಚರಂಡಿ ಸೇರಿಸಲು ಹಕ್ಕು ಉಳ್ಳವರಾಗಿದ್ದಾರೆ. ಅನುಮತಿ ಪತ್ರ ತೆಗೆದುಕೊಳ್ಳಲು ಅರ್ಜಿ ಸಲ್ಲಿಸಿದಾಗ ಯಾವುದೇ ಕ್ರಮ ಕೈಗೊಂಡಿಲ್ಲ. ಈ ಬಗ್ಗೆ ಸಿ.ಇ.ಓ ರವರಿಗೆ ಅರ್ಜಿ ಸಲ್ಲಿಸಿದರೂ ಕ್ರಮ ಕೈಗೊಂಡಿರುವುದಿಲ್ಲವೆಂದು ತಿಳಿಸಿರುತ್ತಾರೆ. ಶ್ರೀಮತಿ ಪ್ರೇಮಲತಾ.ಎನ್. ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಹರಳಹಳ್ಳಿ ಗ್ರಾಮಪಂಚಾಯ್ತಿ, ಹಾಸನ ತಾಲ್ಲೂಕು, ಹಾಸನ ಜಿಲ್ಲೆ ರವರು ನಮ್ಮ ಮನೆಯ ಮುಂದೆ ಚರಂಡಿ ಹಾಕಿಸಿಕೊಡುತ್ತೇವೆ, ಅಂತ ಹೇಳಿದರೂ ಸಹ ವರ್ಕ್ ಆರ್ಡರ್ ತೆಗೆದುಕೊಂಡು ಕೆಲಸ ಮಾಡಿಸುತ್ತಿಲ್ಲ ಅನುಸೂಚಿತ ಜಾತಿ, ಪಂಗಡಗಳ ವಾಸ ಸ್ಥಳಗಳಲ್ಲಿ ಮೂಲಭೂತ ಸೌಕರ್ಯ ಕಲ್ಪಿಸುವುದು ಎದುರುದಾರರ ಕರ್ತವ್ಯವಾಗಿದೆ ಎಂದು ದೂರು ಸಲ್ಲಿಸಿರುತ್ತಾರೆ.

ಎದುರುದಾರರು ಸಲ್ಲಿಸಿರುವ ಗ್ರಾಮ ಪಂಚಾಯಿತಿ ದಾಖಲಾತಿಗಳಲ್ಲಿ ದಿ:21.09.2016 ರಂದು ದೂರುದಾರರ ತಾಯಿಯ ಸಮಕ್ಷಮದಲ್ಲಿ ಮತ್ತು ಗ್ರಾಮಸ್ಥರ ಸಮ್ಮುಖದಲ್ಲಿ ಉಪಾಧ್ಯಕ್ಷರಾದ ಚೈತ್ರ ರವರ ಮುಂದೆ ಸ್ಥಳ ಪರಿಶೀಲನೆ ಮಾಡಿದಾಗ ಸ್ವಾಮಿ ರವರ ಮನೆಯಿಂದ ರಮೇಶ್ ಮೆನೆಯವರೆಗೆ ಚರಂಡಿ ತೋಡಲು ತಾಂತ್ರಿಕವಾಗಿ 'ವಾಟ' ಇಲ್ಲದೇ ಇರುವುದು ಕಂಡುಬಂದಿದೆ, ಅಕ್ಕಪಕ್ಕದ ಮನೆಯವರು ಹಿಂದೆ ಯು.ಜಿ.ಡಿ ಮಾಡುವಾಗ ಗ್ರಾಮಸ್ಥರು ತಕರಾರು ಮಾಡಿರುತ್ತಾರೆ. ಮುಂದಕ್ಕೆ ಯು.ಜಿ.ಡಿ ಮಾಡಲು ಅವಕಾಶ ಕೊಟ್ಟರೆ ಚರಂಡಿ ಮಾಡಲು ಬಿಡುತ್ತೇವೆ ಎಂದು ಹೇಳಿದರು ಎಂಬ ವಿಷಯವನ್ನು ನಮೂದಿಸಿರುತ್ತಾರೆ. ಈಗ ಪುಟ್ಟತಾಯಮ್ಮ ರವರ ಮನೆಯ ಮುಂದೆ ಕಾಮಗಾರಿ ಕೈಗೊಂಡು ಚರಂಡಿ ನಿರ್ಮಾಣ ಮುಕ್ತಾಯವಾಗಿರುವುದು ಕಂಡು ಬಂದಿರುತ್ತದೆ ಮತ್ತು ಎದುರುದಾರರು ಯಾವುದೇ ಇಂಜಿನಿಯರ್ ಸಹಾಯವನ್ನು ತಗೆದುಕೊಳ್ಳದೆ ಚರಂಡಿ ಕಾಮಗಾರಿಯನ್ನು ಮಾಡಿಮುಗಿಸಿದ್ದು ಫೋಟೋಗಳಲ್ಲಿ ಕಾಣತ್ತಿರುವಂತೆ ಒಂದು ವಿದ್ಯುತ್ ಕಂಬದ ತಳಭಾಗದಲ್ಲಿಯೂ ಸಹ ಚರಂಡಿನಿರ್ಮಿಸಿದ್ದಾರೆ. ಸ್ಥಳಾ ಪರಿಶಿಲನಾ ಮಹಜರ್ ನಲ್ಲಿ ಬರೆದುಕೊಂಡಂತೆ ತಾಂತ್ರಿಕ ಸಾಧಕ ಬಾಧಕಗಳನ್ನು ಒಬ್ಬ ಇಂಜಿನಿಯರ್ ಉಪಸ್ಥಿತಿಯಲ್ಲಿ ಚರ್ಚೆ ಮಾಡಿಲ್ಲ ಎದುರುದಾರರು ಕರ್ತವ್ಯಲೋಪವೆಸಗಿದ್ದಾರೆನ್ನಲು ಸಾಕಷ್ಟು ಆಧಾರಗಳಿವೆ

ಕಡತದಲ್ಲಿಯ ಸಂಗತಿಗಳು ಹಾಗೂ ದಾಖಲಾತಿಗಳಿಂದ, ಶ್ರೀಮತಿ ಪ್ರೇಮಲತಾ.ಎನ್. ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಹರಳಹಳ್ಳಿ ಗ್ರಾಮಪಂಚಾಯ್ತಿ, ಹಾಸನ ತಾಲ್ಲೂಕು, ಹಾಸನ ಜಿಲ್ಲೆ ಇವರು ಸಾರ್ವಜನಿಕ/ಸರ್ಕಾರಿ ನೌಕರರಾಗಿದ್ದು, ತಮ್ಮ ಕರ್ತವ್ಯ ಪರಿಪಾಲನೆಯಲ್ಲಿ ನಿಷ್ಠೆಯನ್ನು ತೋರದೆ ಕರ್ತವ್ಯ ಲೋಪವೆಸಗಿ, ಸಾರ್ವಜನಿಕ/ಸರ್ಕಾರಿ ನೌಕರರಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡಿರುವುದು ಮೇಲ್ನೋಟಕ್ಕೆ ಕಂಡುಬರುತ್ತಿರುವುದರಿಂದ, ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಗಳು 1966 ನಿಯಮ 3(1)(ii) ಮತ್ತು

(iii) ರನ್ವಯ ದುರ್ನಡತೆಯೆಸಗಿದ್ದು, ಶಿಸ್ತು ಕ್ರಮಕ್ಕೆ ಭಾಧ್ಯರಾಗಿರುವುದು ಕಂಡು ಬಂದಿರುವುದರಿಂದ, ಕರ್ನಾಟಕ ಲೋಕಾಯುಕ್ತ ಕಾಯ್ದೆಯ ಕಲಂ 12(3) ರಡಿಯಲ್ಲಿ ಪ್ರದತ್ತವಾದ ಅಧಿಕಾರದಡಿಯಲ್ಲಿ, ಎದುರುದಾರರ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳಲು ಹಾಗೂ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ 11-ಎ ರಡಿಯಲ್ಲಿ ಸದರಿಯವರ ವಿರುದ್ಧ ಇಲಾಖಾ ವಿಚಾರಣೆಯನ್ನು ನಡೆಸಲು ಮಾನ್ಯ ಉಪಲೋಕಾಯುಕ್ತರಿಗೆ ವಹಿಸಲು ಕೋರಿರುತ್ತಾರೆ.

ಸರ್ಕಾರವು ಮಾನ್ಯ ಉಪಲೋಕಾಯುಕ್ತರ ವರದಿಯನ್ನು ಪರಿಶೀಲಿಸಿ ಈ ಪ್ರಕರಣದಲ್ಲಿ ಒಳಗೊಂಡಿರುವ ನೌಕರರ ವಿರುದ್ಧ ವಿಚಾರಣೆ ನಡೆಸುವುದು ಸೂಕ್ತವೆಂದು ಭಾವಿಸಿ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು, 1957ರ ನಿಯಮ 14-ಎ ರನ್ವಯ ಪ್ರಕರಣವನ್ನು ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವ ಸಲುವಾಗಿ ಈ ಕೆಳಕಂಡಂತೆ ಆದೇಶಿಸಿದೆ.

**<u>ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/288/ಗ್ರಾಪಂಕಾ/2017 ಬೆಂಗಳೂರು, ದಿನಾಂಕ: 17-05-2017</u>**

ಪ್ರಸ್ತಾವನೆಯಲ್ಲಿ ವಿವರಿಸಲಾದ ಅಂಶಗಳ ಹಿನ್ನೆಲೆಯಲ್ಲಿ ಶ್ರೀಮತಿ ಪ್ರೇಮಲತಾ.ಎನ್. ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಹರಳಹಳ್ಳಿ ಗ್ರಾಮಪಂಚಾಯ್ತಿ, ಹಾಸನ ತಾಲ್ಲೂಕು, ಹಾಸನ ಜಿಲ್ಲೆ ಇವರ ವಿರುದ್ಧ ಇಲಾಖಾ ವಿಚಾರಣಾ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ 11ರ ಅನುಸಾರ ಇಲಾಖಾ ವಿಚಾರಣೆ ನಡೆಸಲು ಸದರಿ ನಿಯಮಾವಳಿಗಳ ನಿಯಮ 14-ಎ ಅಡಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸಿದೆ.

ಈ ಪ್ರಕರಣದಲ್ಲಿ ಸರ್ಕಾರವು ಶಿಸ್ತು ಪ್ರಾಧಿಕಾರವಾಗಿದ್ದು ಆಪಾದಿತರಿಗೆ, ನಿಯಮಾನುಸಾರ ಸೂಕ್ತ ದಂಡನೆ ವಿಧಿಸಲು ಸಕ್ಷಮ ಪ್ರಾಧಿಕಾರವಾಗಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಟಿ.ಪಿ. ಅರುಣ್‌ಕುಮಾರ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಗೆ,**

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಮಾನ್ಯ ಉಪಲೋಕಾಯುಕ್ತರು,ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3. ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.(ಇದರೊಂದಿಗೆ ಈ ಪ್ರಕರಣದ ಮೂಲ ದಾಖಲಾತಿಯನ್ನು ಪುಟ ಸಂಖ್ಯೆ 01 ರಿಂದ 30 ರವರೆಗೆ ಲಗತ್ತಿಸಲಾಗಿದೆ.)
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಹಾಸನ ಜಿಲ್ಲೆ.
5. ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಹಾಸನ ತಾಲ್ಲೂಕು, ಹಾಸನ ಜಿಲ್ಲೆ.
6. ಶ್ರೀಮತಿ ಪ್ರೇಮಲತಾ.ಎನ್. ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಹರಳಹಳ್ಳಿ ಗ್ರಾಮಪಂಚಾಯ್ತಿ, ಹಾಸನ ತಾಲ್ಲೂಕು, ಹಾಸನ ಜಿಲ್ಲೆ.
7. ಗಣಕ ಕೋಶ
8. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.